# ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು ಮತ್ತು ಭಾರತೀಯ ಹವಾಮಾನ ಇಲಾಖೆ

ಗ್ರಾಮೀಣ ಕೃಷಿ ಹವಾಮಾನ ಸೇವಾ
ಕೃಷಿ ಹವಾಮಾನ ಕ್ಷೇತ್ರ ವಿಭಾಗ (IMD)
ನಾಗನಹಳ್ಳಿ, ಮೈಸೂರು 570 003

ದಿನಾಂಕ: 30-01-2024

## ಭಾರತೀಯ ಹವಾಮಾನ ಇಲಾಖೆಯ ಪ್ರಕಾರ ಮೈಸೂರು ಜಿಲ್ಲೆಯ ಹವಾಮಾನ ಮತ್ತು ಕೃಷಿ ಕಾರ್ಯಕ್ರಮಗಳ ವರದಿ ಪತ್ರಿಕೆ

### ಹವಾಮಾನದ ಮುನ್ಸೂಚನೆ (31–01–2024 ರಿಂದ 04–02–2024)

| Parameters | 31.01.2024 | 01.02.2024 | 02.02.2024 | 03.02.2024 | 04.02.2024 |
|---|---|---|---|---|---|
| ಮಳೆ (ಮಿ.ಮೀ) | 0 | 0 | 0 | 0 | 0 |
| ಗರಿಷ್ಠ ಉಷ್ಣಾಂಶ ($^0$ಸೆ) | 30 | 30 | 30 | 30 | 30 |
| ಕನಿಷ್ಠ ಉಷ್ಣಾಂಶ ($^0$ಸೆ) | 18 | 18 | 18 | 18 | 18 |
| ಮೋಡ (ಆಕ್ಟ್ಸ್) | 1 | 1 | 1 | 1 | 1 |
| ಗರಿಷ್ಠ ಗಾಳಿಯ ತೇವಾಂಶ (%) | 82 | 82 | 82 | 82 | 82 |
| ಕನಿಷ್ಠ ಗಾಳಿಯ ತೇವಾಂಶ (%) | 43 | 43 | 43 | 41 | 41 |
| ಗಾಳಿಯ ವೇಗ (ಕಿ.ಮೀ/ಗಂಟೆ) | 2 | 2 | 1 | 3 | 3 |
| ಗಾಳಿಯ ದಿಕ್ಕು (ಡಿಗ್ರಿ) | 68 | 180 | 225 | 116 | 118 |

**ಮುನ್ಸೂಚನೆಯ ಸಾರಾಂಶ**

ಭಾರತೀಯ ಹವಾಮಾನ ಇಲಾಖೆಯ ಪ್ರಕಾರ ಈ ವಾರದ ಮುನ್ಸೂಚನೆ ಮೈಸೂರು ಜಿಲ್ಲೆಯಲ್ಲಿ ದಿನಾಂಕ: 31–01–2024 ರಿಂದ 04–02–2024 ವರೆಗೆ ಮೋಡ ಕವಿದ ವಾತಾವರಣವಿದ್ದು, ಮಳೆ ಬರುವ ಸಂಭವವಿಲ್ಲ. ಗರಿಷ್ಠ ಉಷ್ಣಾಂಶ 30 °C ಮತ್ತು ಕನಿಷ್ಠ ಉಷ್ಣಾಂಶ 18 °C ವರೆಗೆ ದಾಖಲಾಗುವ ಸಾಧ್ಯತೆಯಿದೆ. ಬೆಳಗಿನ ಗಾಳಿಯ ತೇವಾಂಶ ಶೇ. 82 % ವರೆಗೆ ಮತ್ತು ಮಧ್ಯಾಹ್ನದ ತೇವಾಂಶ ಶೇ. 41–43% ವರೆಗೆ ಮತ್ತು ಗಾಳಿಯು ಗಂಟೆಗೆ 1–3 ಕಿಲೋಮೀಟರ್ ವೇಗದಲ್ಲಿ ಬೀಸುವ ಸಾಧ್ಯತೆಯಿದೆ.

### ಕೃಷಿ ಚಟುವಟಿಕೆಗಳ ಬಗ್ಗೆ ಅನುಸರಿಸಬಹುದಾದ ವಿವರ:

| ಬೆಳೆ/ ಜಾನುವಾರಗಳು | ರೋಗ ಮತ್ತು ಕೀಟ | ಹಾನಿ ಲಕ್ಷಣಗಳು | ಕೃಷಿ ಸಲಹೆಗಳು |
|---|---|---|---|
| ಮಾವು | ಬೂದಿರೋಗ ಹಾಗೂ ಜಿಗಿಹುಳು (ಜಾಸಿಡ್ಸ್) | • ವಾತಾವರಣದಲ್ಲಿ ಬೆಳಗಿನ ಸಮಯದಲ್ಲಿ ಕಡಿಮೆ ಉಷ್ಣಾಂಶ ಮತ್ತು ಹೆಚ್ಚಿನ ಆರ್ದ್ರತೆ ಇರುವುದರಿಂದ ಹೂ ಬಿಡುವ ಹಂತದಲ್ಲಿ ಬೂದಿರೋಗದ ಹಾಗೂ ಜಿಗಿಹುಳು ಭಾದೆ ಕಂಡು ಬರುತ್ತದೆ. ಬೂದಿರೋಗದ ನಿಯಂತ್ರಣಕ್ಕಾಗಿ ಹೂ ಬಿಡುವ ಮತ್ತು ಕಾಯಿ ಕಚ್ಚಿದ ಹಂತದಲ್ಲಿ ಲೀ. ನೀರಿಗೆ 3.0 ಗ್ರಾಂ. ನೀರಿನಲ್ಲಿ ಕರಗುವ ಗಂಧಕದ ಪುಡಿ ಅಥವಾ 1.0 ಮಿಲೀ. ಹೆಕ್ಸಾಕೋನೋಜೋಲ್ 5 ಇಸಿ. ಔಷದವನ್ನು ಬೆರಸಿ ಸಿಂಪಡಿಸಬೇಕು.<br>• ಜಿಗಿ ಹುಳು ಕೀಟದ ನಿಯಂತ್ರಣಕ್ಕೆ ಹೂವು ಬಿಡುವ ಮುಂಚೆ ಮತ್ತು ಕಾಯಿಗಳು ಬಟಾಣಿ ಕಾಳಿನ ಗಾತ್ರದಲ್ಲಿದ್ದಾಗ ಲೀ. ನೀರಿಗೆ 0.3 ಮಿಲೀ ಇಮಿಡಾಕ್ಲೋಪ್ರಿಡ್ 17.8 ಎಸ್.ಎಲ್. ಬೆರೆಸಿ ಸಿಂಪಡಿಸುವುದು. | |
| ಅವರೆ | ಕಾಯಿ ಕೊರಕ | • ಗಿಡ ಹೂವಾಡುವ ಹಂತದಲ್ಲಿ 5 ಮಿ.ಲೀ ಬೇವಿನ ಎಣ್ಣೆಯನ್ನು ಪ್ರತಿ ಲೀಟರ್ ನೀರಿನೊಂದಿಗೆ ಬೆರೆಸಿ ಸಿಂಪರಣೆ ಮಾಡಬೇಕು. | |

| | | |
|---|---|---|
| | | • ಎಕರೆಗೆ 5 ರಂತೆ ಮೋಹಕ ಬಲೆಗಳನ್ನು ಹಾಕಬೇಕು.<br>• ಕಾಯಿ ಕೊರಕದ ಬಾಧೆಕಂಡು ಬಂದಾಗಕ್ವಿನಾಲ್‌ಫಾಸ್ 25 ಇ.ಸಿ ಅನ್ನು 2 ಮಿ.ಲೀ. ಪ್ರತಿ ಲೀಟರ್ ನೀರಿಗೆಅಥವಾ ಫೆನ್ವಲರೇಟ್ 20 ಇ.ಸಿ ಅನ್ನು 3 ಮಿ.ಲೀ. ಪ್ರತಿ ಲೀಟರ್ ನೀರಿಗೆ ಬೆರೆಸಿ ಸಿಂಪಡಿಸಬೇಕು. |
| ಕುಂಬಳಕಾಯಿ ಮತ್ತು ಸೌತೆಕಾಯಿ | ಬೂಜು ರೋಗ ಹಾಗೂ ಬೂದಿ ರೋಗ | ಬೂಜು ರೋಗ: ಮೊದಲಿಗೆ ಕೋನಾಕಾರದ ಹಳದಿ ಚುಕ್ಕೆಗಳು ಕಾಣಿಸಿಕೊಳ್ಳುತ್ತವೆ. ಅನಂತರ ಅವು ಒಂದಕ್ಕೊಂದು ಸೇರಿಕೊಂಡು, ಎಲೆಗಳು ಒಣಗುತ್ತವೆ. ಮೆಟಲಾಕ್ಸಿಲ್+ಮ್ಯಾಂಕೋಜೆಬ್@ 2 ಗ್ರಾಂ/ಲೀ. ನೀರಿಗೆ ಬೆರೆಸಿ ಸಿಂಪಡಿಸಬೇಕು.<br>ಬೂದಿ ರೋಗ: ಮೊದಲಿಗೆ ಸೂಕ್ಷ್ಮಗಾತ್ರದ, ಬಿಳಿ ಬೂದು ಬಣ್ಣದ ಚುಕ್ಕೆಗಳು ಎಲೆ ಮತ್ತು ಕಾಂಡಗಳ ಮೇಲೆ ಕಾಣಿಸುತ್ತವೆ. ರೋಗದ ತೀವ್ರತೆ ಹೆಚ್ಚಾದಾಗ ಎಲೆಗಳು ಪೂರ್ತಿ ಒಣಗುತ್ತವೆ. ಕಾರ್ಬೆಂಡಜಿಂ @ 1 ಗ್ರಾಂ/ಲೀ. ನೀರಿಗೆ, (180 ಗ್ರಾಂ/ಎಕರೆಗೆ.) ಅಥವಾ ಡೈನೊಕಾಪ್ 1.5 ಗ್ರಾಂ/ಲೀ. ನೀರಿಗೆ ಬೆರೆಸಿ ಸಿಂಪಡಿಸಬೇಕು.<br>ಪ್ರತಿ ಎಕರೆಗೆ 200 ಲೀಟರ್ ಸಿಂಪರಣಾ ದ್ರಾವಣವನ್ನು ಬೇಕಾಗುತ್ತದೆ. 2 ವಾರಗಳ ಅಂತರದಲ್ಲಿ ತಿಳಿಸಿದ ಶಿಲೀಂಧ್ರ ನಾಶಕದ ದ್ರಾವಣದಿಂದ ಮೂರು ಸಾರಿ ಸಿಂಪಡಿಸಬೇಕು. |
| ಕಬ್ಬು | ತರಗು ನಿರ್ವಹಣೆ | ಕಬ್ಬು ಕಟಾವು ಮುಗಿದ ಮೇಲೆ ಗರಿ ಅಥವಾ ತರಗನ್ನು ಜಮೀನಿನಲ್ಲೆ ಪರ್ಯಾಯ ಸಾಲುಗಳಲ್ಲಿ ಹರಡಿ ನೀರು ಹಾಯಿಸಿ, ಎಕರೆಗೆ 15 ಕಿ. ಗ್ರಾಂ ಯೂರಿಯವನ್ನು ಬೆರಸಿದ ಶೇ. 5ರ ಸಗಣಿ ಬಗ್ಗಡವನ್ನು ಚಿಮುಕಿಸುವುದು.<br>ಪ್ಲೋರೋಟಸ್ ಸೂಕ್ಷ್ಮಾಣು ಜೀವಿಯನ್ನು ಎಕರೆಗೆ 4 ಕಿ. ಗ್ರಾಂ ಪ್ರಮಾಣದಲ್ಲಿ ಅಥವಾ ಎಕರೆಗೆ 1– 1.5 ಟನ್ ಸಕ್ಕರೆ ಕಾರ್ಖಾನೆ ಮಡ್ಡಿಗೊಬ್ಬರ ಹರಡುವುದರಿಂದ ತರಗನ್ನು ತ್ವರಿತವಾಗಿ ಕಳೆಯಿಸಬಹುದು. |

- ಬೆಳಗಿನ ಜಾವ ಹಾಗೂ ರಾತ್ರಿ ವೇಳೆ ಉಷ್ಣಾಂಶದಲ್ಲಿ ಸ್ವಲ್ಪ ಇಳಿತವಿರುವುದರಿಂದ ಜಾನುವಾರು, ರೇಷ್ಮೆ ಹಾಗೂ ಕೋಳಿ ಸಾಕಣೆ ಕೊಠಡಿಯ ಉಷ್ಣಾಂಶದ ಸ್ಥಿರತೆಯನ್ನು ವಿದ್ಯುತ್ ಬಲ್ಬ್ ಅನ್ನು ಒದಗಿಸುವ ಮೂಲಕ ಕಾಪಾಡಿಕೊಳ್ಳುವುದು.
- ಎರೆಹುಳು ಸಾಕಾಣಿಕೆ ಘಟಕದಲ್ಲಿ ಹೆಚ್ಚಿನ ತೇವಾಂಶ ಇರದಂತೆ ಎಚ್ಚರಿಕೆ ವಹಿಸಬೇಕು. ಎರೆಕುಣಿಗಳಲ್ಲಿ ಎರೆಗೊಬ್ಬರ ಉತ್ಪಾದನೆಯಾಗುವವರೆಗೆ ಶೇ. 60–70 ರಷ್ಟು ತೇವಾಂಶ ಇರುವ ಹಾಗೆ ನೋಡಿಕೊಳ್ಳಬೇಕು.

- ರೈತರು "ದಾಮಿನಿ" ಎಂಬ ತಂತ್ರಾಂಶವನ್ನುಗೂಗಲ್ ಪ್ಲೇ ಸ್ಟೋರ್‌ನಿಂದ ಡೌನ್ ಲೋಡ್ ಮಾಡಿಕೊಂಡರೆ ಇದರಿಂದ ಮಿಂಚಿನ ಮನ್ಸೂಚನೆಯನ್ನು ಅತ್ಯಂತ ನಿಖರವಾಗಿ ತಿಳಿಯಬಹುದು.
- ಹಾಗೆಯೇ "ಮೌಸಮ್" ಮತ್ತು "ಮೇಘದೂತ್" ತಂತ್ರಾಂಶಗಳಿಂದ ಮಳೆಯ ಮುನ್ಸೂಚನೆ ಮತ್ತು ಕೃಷಿ ಸಲಹೆಗಳನ್ನು ಪಡೆಯಲು ಸೂಚಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ರೈತರು ದೂರವಾಣಿ ಮೂಲಕ ಡಾ॥. ಸಿ. ರಾಮಚಂದ್ರ, ಹಿರಿಯ ಕ್ಷೇತ್ರ ಅಧೀಕ್ಷಕರು/ ಡಾ. ಸುಮಂತ್ ಕುಮಾರ್, ಜಿ. ವಿ, ಸಹ ಸಂಶೋಧಕರು, ದೂರವಾಣಿ ಸಂಖ್ಯೆ. 08212591267/ 9535345814 ರವರನ್ನು ಸಂಪರ್ಕಿಸಬಹುದು.

ಕೃಷಿ ಹವಾಮಾನ ಕ್ಷೇತ್ರ ವಿಭಾಗ,
ನಾಗನಹಳ್ಳಿ, ಮೈಸೂರು